ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
**Department of Collegiate Education**
Government of Karnataka

NO. 1, 2nd Floor, DTE Building, Palace Road, Bangalore - 560 001; Phone: 080 2226 3327, Fax: 080 2228 3758, email: bngcce@kar.nic.in


ಸಂಖ್ಯೆ: ಕಾಶಿಇ/ಮಾತಂವಿ/57/ಲ್ಯಾಪ್‌ಟಾಪ್ ವಿತರಣೆ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ:20 .02.2018

MOST URGENT

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಮಾನ್ಯರೆ

ವಿಷಯ: 2017-18 ನೇ ಶೈಕ್ಷಣಿಕ ವರ್ಷದಲ್ಲಿ ಇಂಜಿನಿಯರಿಂಗ್, ವೈದ್ಯಕೀಯ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ

ಉಲ್ಲೇಖ: 1) ಸರ್ಕಾರದ ಪತ್ರ ಸಂ: ಇಡಿ 12 egov 2017, ಬೆಂಗಳೂರು, ದಿ:18.07.2017.
2) ಸರ್ಕಾರದ ಆದೇಶ ಸಂ: ಇಡಿ 72 ಹೆಚ್‌ಪಿಯು 2017, ಬೆಂಗಳೂರು. ದಿ:25.07.2017.

2017-18 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 110 ರಲ್ಲಿ "ಇಂಜಿನಿಯರಿಂಗ್, ವೈದ್ಯಕೀಯ, ಪಾಲಿಟೆಕ್ನಿಕ್ ಮತ್ತು ಪ್ರಥಮ ದರ್ಜೆ ಕಾಲೇಜುಗಳಲ್ಲಿ 2017-18ನೇ ಸಾಲಿನಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗುವುದು. ಸುಮಾರು 1.5 ಲಕ್ಷ ವಿದ್ಯಾರ್ಥಿಗಳಿಗೆ ಇದರಿಂದ ಅನುಕೂಲವಾಗಲಿದೆ" ಎಂದು ತಿಳಿಸಲಾಗಿದೆ. ಬಜೆಟ್ ಘೋಷಣೆಗೆ ಅನುಗುಣವಾಗಿ ಕೆಳಕಂಡ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆದಿರುವ ಕುಟುಂಬದ ವಾರ್ಷಿಕ ವರಮಾನ ರೂ. 2.50 ಲಕ್ಷಗಳವರೆಗಿರುವ ಎಲ್ಲಾ ವರ್ಗಗಳ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ಕಲಿಕಾ-ಸಾಮಗ್ರಿಯಾಗಿ ಒದಗಿಸಲು ಉದ್ದೇಶಿಸಲಾಗಿದೆ.

v. ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ಘಟಕ ಕಾಲೇಜುಗಳ ಪ್ರಥಮ ಪದವಿ ವಿದ್ಯಾರ್ಥಿಗಳು.
vi. ಸರ್ಕಾರಿ ವೈದ್ಯಕೀಯ ಮತ್ತು ದಂತವೈದ್ಯಕೀಯ ಕಾಲೇಜುಗಳ ಪ್ರಥಮ ಪದವಿ ವಿದ್ಯಾರ್ಥಿಗಳು.
vii. ಸರ್ಕಾರಿ ಮತ್ತು ಅನುದಾನಿತ ಎಂಜಿನಿಯರಿಂಗ್ ಹಾಗೂ ಆರ್ಕಿಟೆಕ್ಚರ್ ಕಾಲೇಜುಗಳ ಪ್ರಥಮ ಪದವಿ ವಿದ್ಯಾರ್ಥಿಗಳು.
viii. ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಥಮ ಡಿಪ್ಲೊಮಾ ವಿದ್ಯಾರ್ಥಿಗಳು.

ಇದರ ಸಂಬಂಧ ಸರ್ಕಾರ ಕಾಲೇಜು ಶಿಕ್ಷಣ ಇಲಾಖೆಯನ್ನು ನೋಡಲ್ ಸಂಸ್ಥೆಯನ್ನಾಗಿ ನೇಮಿಸಿದ್ದು, ಅಗತ್ಯ ಸಂಖ್ಯೆಯ ಲ್ಯಾಪ್‌ಟಾಪ್‌ಗಳನ್ನು ಖರೀದಿಸಲು 21ನೇ ಡಿಸೆಂಬರ್ 2017 ರಂದು ಟೆಂಡರ್ ಕರೆಯಲಾಗಿದೆ.

2017-18ನೇ ಸಾಲಿನಲ್ಲಿ ಪ್ರವೇಶ ಪಡೆದಿರುವ ಎಲ್ಲಾ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ವಿತರಣಾ ಯೋಜನೆಯನ್ನು ಪ್ರತಿ ಕಾಲೇಜಿನಲ್ಲಿ ಕನಿಷ್ಟ ಮೂರು ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡುವ ಮೂಲಕ ಸಾಂಕೇತಿಕವಾಗಿ ಯೋಜನೆಯನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿದ್ದು ಸನ್ಮಾನ್ಯ ಮುಖ್ಯಮಂತ್ರಿಗಳು ಯೋಜನೆಯನ್ನು ***ದಿನಾಂಕ 27ನೇ ಫೆಬ್ರವರಿ 2018 ರಂದು ಸಂಜೆ 4.30 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್‌ಹಾಲ್‌ನಲ್ಲಿ*** ಉದ್ಘಾಟಿಸಲಿದ್ದಾರೆ.

ಸರ್ಕಾರಿ ಮತ್ತು ಅನುದಾನಿತ ಇಂಜನಿಯರಿಂಗ್, ಆರ್ಕಿಟೆಕ್ಚರ್ ಕಾಲೇಜುಗಳ ಹಾಗೂ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆದಿರುವ ಅರ್ಹ ವಿದ್ಯಾರ್ಥಿಗಳಲ್ಲಿ ಒಬ್ಬ ವಿದ್ಯಾರ್ಥಿಗೆ ಉದ್ಘಾಟನಾ ಸಮಾರಂಭದಲ್ಲಿ ಲ್ಯಾಪ್‌ಟಾಪ್ ವಿತರಿಸಲು ತೀರ್ಮಾನಿಸಲಾಗಿದ್ದು ಲ್ಯಾಪ್‌ಟಾಪ್ ವಿತರಣಾ ದಿನಾಂಕದಂದು ಸಮಾರಂಭದಲ್ಲಿ ಭಾಗವಹಿಸಲು ಆಯಾ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ವಿದ್ಯಾರ್ಥಿಗಳ ಪೈಕಿ ಒಬ್ಬರನ್ನು ಲಾಟರಿ ಮೂಲಕ ಪಾರದರ್ಶಕವಾಗಿ ಆಯ್ಕೆಮಾಡಲು ಕೋರಲಾಗಿದೆ. ಆಯ್ಕೆಗೊಂಡ ವಿದ್ಯಾರ್ಥಿ/ ವಿದ್ಯಾರ್ಥಿನಿಯ ಜೊತೆ ಕಾಲೇಜಿನ/ ಸಂಸ್ಥೆಯ ಒಬ್ಬ ಅಧ್ಯಾಪಕರು ಸಹ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲು ***ದಿನಾಂಕ 27ನೇ ಫೆಬ್ರವರಿ 2018 ರಂದು ಅಪರಾಹ್ನ 12 ಗಂಟೆಗೆ ಎಸ್.ಜೆ. ಪಾಲಿಟೆಕ್ನಿಕ್ (ರಾಸಾಯನಿಕ ವಿಭಾಗ), ಕೆ. ಆರ್. ವೃತ್ತ, ಬೆಂಗಳೂರು ಇಲ್ಲಿನ ಸಭಾಂಗಣದಲ್ಲಿ*** ಹಾಜರಿರಲು ಸೂಕ್ತ ಕ್ರಮ ಕೈಗೊಳ್ಳಲು ಕೋರಿದೆ.

ತಮ್ಮ ವಿಶ್ವಾಸಿ,

**ಕಾಲೇಜು ಶಿಕ್ಷಣ ಆಯುಕ್ತರು**

**ಪ್ರತಿಯನ್ನು:**

1. **ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು – ಮಾಹಿತಿಗಾಗಿ**
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ) ಅವರ ಆಪ್ತ ಕಾರ್ಯದರ್ಶಿಗಳು – ಮಾಹಿತಿಗಾಗಿ
3. ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು/ ನಿರ್ದೇಶಕರು/ ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆಗೆ – ಮಾಹಿತಿಗಾಗಿ.

E-Governence
M. upload (ತಕ್ಷಣವೇ)
21/02/18